All India Radio: Bangalore
Regional Bulletin In Kannada
06.05.2025 / 2.30 p.m.
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ರಾಜ್ಯ ಸೇರಿದಂತೆ ದೇಶಾದ್ಯಂತ ನಾಳೆ ರಕ್ಷಣಾ ಅಣುಕು ಕವಾಯತು
- ದೇಶದ ರಕ್ಷಣೆಗೆ ಸಂಬಂಧಿಸಿದಂತೆ ಕೇಂದ್ರದ ನಿರ್ಧಾರಕ್ಕೆ ರಾಜ್ಯ ಬೆಂಬಲ ; ಸಚಿವ ಎಂ.ಬಿ. ಪಾಟೀಲ್ ಅಭಿಮತ
- ಉತ್ತರ ಕನ್ನಡ ಜಿಲ್ಲೆಯಲ್ಲಿ ದೇಶದಲ್ಲೇ ಮೊಟ್ಟ ಮೊದಲ ಬಾರಿಗೆ ಮತ್ಸ್ಯ -ಸಂಜೀವಿನಿ ಯೋಜನೆ ಜಾರಿ - ಸಚಿವ ಮಂಕಾಳ ವೈದ್ಯ
- ತುಮಕೂರಿನಲ್ಲಿ ವಿಶ್ವದರ್ಜೆ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕೆ ೪೧ ಎಕರೆ ಜಮೀನು ರಾಜ್ಯ ಕ್ರಿಕೆಟ್ ಸಂಸ್ಥೆಗೆ ಹಸ್ತಾಂತರ

<><><><>

ಕೇಂದ್ರ ಗೃಹ ಇಲಾಖೆ ರಾಜ್ಯ ಸೇರಿದಂತೆ ದೇಶದ್ಯಾಂತ ನಾಳೆ ನಾಗರಿಕರಿಗೆ ರಕ್ಷಣಾ ಕವಾಯತು ಏರ್ಪಡಿಸಲು ಸೂಚಿಸಿದೆ. ನಾಳೆ ನಡೆಯಲಿರುವ ನಾಗರಿಕ ರಕ್ಷಣಾ ಅಣಕು ಅಭ್ಯಾಸ ಕುರಿತು ರಾಜ್ಯಗಳ ಮುಖ್ಯ ಕಾರ್ಯದರ್ಶಿಗಳೊಂದಿಗೆ ಕೇಂದ್ರ ಗೃಹ ಕಾರ್ಯದರ್ಶಿ ಗೋವಿಂದ್ ಮೋಹನ್ ಅವರು ಇಂದು ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿದರು. ನಾಗರಿಕ ರಕ್ಷಣಾ ಮಹಾನಿರ್ದೇಶಕರು, ರಾಷ್ಟ್ರೀಯ ವಿಪತ್ತು ಪ್ರತಿಕ್ರಿಯೆ ಪಡೆ - ಎನ್‌ಡಿಆರ್‌ಎಫ್‌ನ ಮಹಾನಿರ್ದೇಶಕರು ಮತ್ತು ಇತರ ಹಿರಿಯ ಅಧಿಕಾರಿಗಳು ರಾಷ್ಟ್ರ ರಾಜಧಾನಿಯಲ್ಲಿರುವ ಗೃಹ ಸಚಿವಾಲಯದ ಕಚೇರಿಯಲ್ಲಿ ನಡೆಯುವ ಸಭೆಯಲ್ಲಿ ಭಾಗವಹಿಸಿದ್ದರು. ದೇಶದ ೨೪೪ ವರ್ಗೀಕರಿಸಲಾದ ನಾಗರಿಕ ರಕ್ಷಣಾ ಜಿಲ್ಲೆಗಳಲ್ಲಿ ನಾಗರಿಕ ರಕ್ಷಣಾ ಸಮರಾಭ್ಯಾಸ ಮತ್ತು ಪೂರ್ವಾಭ್ಯಾಸವನ್ನು ಆಯೋಜಿಸಲು ಗೃಹ ಸಚಿವಾಲಯ ನಿರ್ಧರಿಸಿದೆ. ಇದರ ಭಾಗವಾಗಿ ಆಯ್ದ ಪ್ರದೇಶಗಳಲ್ಲಿ ವಾಯುದಾಳಿ ಎಚ್ಚರಿಕೆ ಸೈರನ್‌ಗಳನ್ನು ಅಳವಡಿಸುವುದು, ವಿದ್ಯಾರ್ಥಿಗಳು ಮತ್ತು ನಾಗರಿಕರಿಗೆ ವೈಮಾನಿಕ ದಾಳಿ ಅಥವಾ ಬಾಂಬ್ ದಾಳಿಯಂತಹ ತುರ್ತು ಸಂದರ್ಭದಲ್ಲಿ ಹೇಗೆ

ಪ್ರತಿಕ್ರಿಯಿಸಬೇಕೆಂಬುದರ ಕುರಿತು ಹೇಳಿಕೊಡುವುದು, ಶತ್ರು ದಾಳಿ ಸಂದರ್ಭದಲ್ಲಿ ಕಿಟಿಕಿಗಳಿಂದ ಮನೆ ಹೊರಗೆ ಬೆಳಕು ಹೋಗದಂತೆ ಮುಚ್ಚುವುದು, ವಿದ್ಯುತ್ ಮುಖ್ಯ ಸ್ಥಾವರಗಳು, ಪ್ರಮುಖ ಸಾರಿಗೆ ವ್ಯವಸ್ಥೆಯನ್ನು ರಕ್ಷಿಸುವುದರ ಬಗ್ಗೆ ಕ್ರಮ ವಹಿಸುವುದು ಮತ್ತು ತುರ್ತು ಸಂದರ್ಭದಲ್ಲಿ ಒಂದು ಸ್ಥಳದಿಂದ ಇನ್ನೊಂದು ಸ್ಥಳಕ್ಕೆ ಪಾರಾಗುವುದರ ಬಗ್ಗೆ ಸರ್ಕಾರ ಕೆಲವು ಸೂಚನೆಗಳನ್ನು ಹೊರಡಿಸಿದೆ. ಈ ಅಭ್ಯಾಸವನ್ನು ಗ್ರಾಮ ಮಟ್ಟದವರೆಗೆ ನಡೆಸಲು ಯೋಜಿಸಲಾಗಿದೆ. ವಾಯುದಾಳಿ ತಾಪಮಾನ ಏರಿಕೆ ವ್ಯವಸ್ಥೆಗಳ ಪರಿಣಾಮಕಾರಿತ್ವವನ್ನು ನಿರ್ಣಯಿಸುವುದು, ಭಾರತೀಯ ವಾಯುಪಡೆಯೊಂದಿಗೆ ಹಾಟ್‌ಲೈನ್ ಅಥವಾ ರೇಡಿಯೋ ಸಂವಹನಗಳ ಕಾರ್ಯಾಚರಣೆ ಮತ್ತು ನಿಯಂತ್ರಣ ಕೊಠಡಿಗಳ ಕಾರ್ಯವನ್ನು ಪರೀಕ್ಷಿಸುವುದು ಅಣಕು ಅಭ್ಯಾಸದ ಪ್ರಾಥಮಿಕ ಉದ್ದೇಶವಾಗಿದೆ.

<><><><>

ದೇಶದ ರಕ್ಷಣೆಯ ದೃಷ್ಟಿಯಿಂದ ಕೇಂದ್ರ ಸರ್ಕಾರ ಕೈಗೊಳ್ಳುವ ಯಾವುದೇ ನಿರ್ಧಾರಕ್ಕೆ ರಾಜ್ಯ ಸರ್ಕಾರ ಸಂಪೂರ್ಣ ಬೆಂಬಲ ನೀಡಲಿದೆ ಎಂದು ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಈ ಕುರಿತು ಮಾತನಾಡಿರುವ ಅವರು, ರಕ್ಷಣೆಯ ವಿಚಾರ ಬಂದಾಗ ದೇಶದ ಹಿತಾಸಕ್ತಿಯೇ ಮೊದಲು ಪಾಕಿಸ್ತಾನ ಭಯೋತ್ಪಾದಕ ರಾಷ್ಟ್ರವೆಂಬುದು ಎಲ್ಲರಿಗೂ ತಿಳಿದಿರುವ ವಿಷಯವಾಗಿದ್ದು, ಆ ದೇಶಕ್ಕೆ ತಕ್ಕ ಪಾಠ ಕಲಿಸುವ ಅಗತ್ಯವಿದೆ ಎಂದಿದ್ದಾರೆ.

<><><><>

ದೇಶದಲ್ಲೇ ಮೊದಲ ಬಾರಿಗೆ ಉತ್ತರ ಕನ್ನಡ ಜಿಲ್ಲೆಯಲ್ಲಿ ಮೀನುಗಾರ ಮಹಿಳೆಯರ ಉತ್ಪಾದಕ ಕಂಪನಿ ರಚಿಸುವ ಮೂಲಕ ಮೀನುಗಾರಿಕೆ ಮೌಲ್ಯ ಸರಪಳಿ ಅಭಿವೃದ್ಧಿಪಡಿಸುವ ನಿಟ್ಟಿನಲ್ಲಿ ಮತ್ಸ್ಯ-ಸಂಜೀವಿನಿ ಯೋಜನೆ ಅನುಷ್ಠಾನಗೊಳಿಸಲಾಗುತ್ತಿದೆ ಎಂದು ರಾಜ್ಯ ಮೀನುಗಾರಿಕೆ ಸಚಿವ ಮಂಕಾಳ ವೈದ್ಯ ತಿಳಿಸಿದ್ದಾರೆ. ಭಟ್ಕಳದ ಅಳಿವೆಕೋಡಿಯಲ್ಲಿ ನಡೆದ ಜಲಶ್ರೀ ಮತ್ಸ್ಯ-ಸಂಜೀವಿನಿ ಮಹಿಳಾ ಕಿಸಾನ್ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಮೊದಲ ಬಾರಿಗೆ ಮೀನುಗಾರ ಮಹಿಳೆಯರ ಉತ್ಪಾದಕರ ಕಂಪನಿ ರಚಿಸುವ ಮೂಲಕ ತಾಜಾ ಮತ್ತು ಒಣ ಮೀನಿನ ಸಂಗ್ರಹಣೆ, ಪ್ರಾಥಮಿಕ ಸಂಸ್ಕರಣೆ ಮತ್ತು ಮೌಲ್ಯವರ್ಧಿತ ಉತ್ಪನ್ನಗಳ ಉತ್ಪಾದನೆ ಮತ್ತು ಮಾರುಕಟ್ಟೆ ಜೋಡಣೆ, ಜಲಕೃಷಿ ಪ್ರವಾಸೋದ್ಯಮ ಮತ್ತು ಬೈವಾಳ ಕೃಷಿ, ಕಡಲಕಳೆ ಕೃಷಿ, ಪಂಜರ ಕೃಷಿ

ಮತ್ತು ಹಿತ್ತಲ ಅಲಂಕಾರಿಕ ಮೀನು ಸಾಕಣೆ ಸೇರಿದಂತೆ ವಿವಿಧ ಚಟುವಟಿಕೆಗಳನ್ನು ಕೈಗೊಳ್ಳಲಾಗುತ್ತದೆ ಎಂದರು. ಉತ್ತರ ಕನ್ನಡ ಜಿಲ್ಲೆಯ ೫ ತಾಲ್ಲೂಕುಗಳಲ್ಲಿ ತಾಜಾ ಮೀನು ಸಂಗ್ರಹಣಾ ಕೇಂದ್ರಗಳು, ಶೈತ್ಯಾಗಾರ ಘಟಕಗಳು, ಆಧುನಿಕ ಮೀನು ಒಣಗಿಸುವ ಘಟಕಗಳು, ಸೇರಿದಂತೆ ಅಗತ್ಯ ಮೂಲಸೌಕರ್ಯಕ್ಕೆ ಭೂಮಿ ಗುರುತಿಸುವ ಅವಶ್ಯಕತೆಯಿದೆ ಎಂದು ಸಚಿವರು ತಿಳಿಸಿದರು.

<><><><>

ತುಮಕೂರಿನಲ್ಲಿ ವಿಶ್ವದರ್ಜೆ ಕ್ರಿಕೆಟ್ ಕ್ರೀಡಾಂಗಣಕ್ಕೆ ೪೧ ಎಕರೆ ಜಮೀನನ್ನು ರಾಜ್ಯ ಕ್ರಿಕೆಟ್ ಸಂಸ್ಥೆಗೆ ಹಸ್ತಾಂತರಿಸಲಾಗಿದೆ. ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ - ಎಐಎಡಿಬಿಗೆ ಸೇರಿದ ೪೧ ಎಕರೆ ಜಮೀನಿನ ಸ್ವಾಧೀನ ಪತ್ರವನ್ನು ರಾಜ್ಯ ಕ್ರಿಕೆಟ್ ಸಂಸ್ಥೆಗೆ ಸಚಿವ ಎಂ.ಬಿ. ಪಾಟೀಲ್ ನಿನ್ನೆ ಹಸ್ತಾಂತರಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ತುಮಕೂರು ರಾಜ್ಯದಲ್ಲಿ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಜಿಲ್ಲೆಗಳಲ್ಲಿ ಒಂದಾಗಿದ್ದು, ಇಲ್ಲಿ ಅಂತಾರಾಷ್ಟ್ರೀಯ ದರ್ಜೆಯ ಕ್ರಿಕೆಟ್ ಕ್ರೀಡಾಂಗಣದ ನಿರ್ಮಾಣ ಕುರಿತಂತೆ ಜನರ ಬೇಡಿಕೆಗೆ ಸ್ಪಂದಿಸಲಾಗಿದೆ. ಈ ಯೋಜನೆಯಿಂದ ತುಮಕೂರಿನ ಕ್ರೀಡಾ ಮೂಲಸೌರ್ಯ ಹೆಚ್ಚಾಗುವುದರ ಜೊತೆಗೆ ಯುವ ಪ್ರತಿಭೆಗಳಿಗೆ ಉಜ್ವಲ ಅವಕಾಶಗಳು ಲಭ್ಯವಾಗಲಿದೆ ಎಂದಿದ್ದಾರೆ.

<><><><>

ವಿದ್ಯಾರ್ಥಿಗಳಿಗೆ ಗುಣಮಟ್ಟದ ಹಾಗೂ ಮೌಲ್ಯಯುತ ಶಿಕ್ಷಣ ಕಲ್ಪಿಸಲು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಪ್ರತಿ ಗ್ರಾಮ ಪಂಚಾಯಿತಿಗೊಂದು ಕಾನ್ವೆಂಟ್ ಮಾದರಿ ಶಾಲೆ ನಿರ್ಮಿಸಲಾಗುವುದು ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಹೆಚ್ ಮುನಿಯಪ್ಪ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ೧೫೦ ಕೋಟಿ ರೂಪಾಯಿಗಳ ಸಿ.ಎಸ್.ಆರ್ ಅನುದಾನದಡಿ ೧೧೪ ಶಾಲೆಗಳನ್ನು ಅಭಿವೃದ್ಧಿಪಡಿಸಲು ಮುಖ್ಯಮಂತ್ರಿಗಳು ಶಂಕುಸ್ಥಾಪನೆ ನೆರವೇರಿಸಿದ್ದಾರೆ. ಒಂದು ವರ್ಷದಲ್ಲಿ ಕಾಮಗಾರಿ ಪೂರ್ಣಗೊಳ್ಳುವ ವಿಶ್ವಾಸವಿದೆ. ವಿದ್ಯಾರ್ಥಿಗಳಿಗೆ ಪಿಯುಸಿ ಹಂತದವರೆಗೆ ಉಚಿತ ಗುಣಮಟ್ಟದ ಶಿಕ್ಷಣ ನೀಡಿದಲ್ಲಿ ಮುಂದಿನ

ಭವಿಷ್ಯ ರೂಪಿಸಿಕೊಳ್ಳಲು ಇದರಿಂದ ಸಹಕಾರಿಯಾಗಲಿದೆ ಹೇಳಿದ್ದಾರೆ. ಇದೇ ವೇಳೆ ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಹೆಚ್ಚು ಅಂಕ ಪಡೆದ ೧೬ ವಿದ್ಯಾರ್ಥಿಗಳನ್ನು ಅಭಿನಂದಿಸಿದರು.

<><><>

ದಕ್ಷಿಣ ಕನ್ನಡ ಜಿಲ್ಲೆಯ ಜನತೆ ಶಾಂತಿ ಕಾಪಾಡುವಂತೆ ಆರೋಗ್ಯ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ದಿನೇಶ್ ಗುಂಡೂರಾವ್ ಮನವಿ ಮಾಡಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಇತ್ತೀಚೆಗೆ ಸಾವನ್ನಪ್ಪಿದ ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ವಿರುದ್ಧ ಅಂದಿನ ಬಿಜೆಪಿ ಸರ್ಕಾರ ರೌಡಿ ಶೀಟರ್ ಪಟ್ಟಿಯಲ್ಲಿ ಸೇರಿಸಿದ್ದು ಯಾಕೆ ಎಂದು ಪ್ರಶ್ನಿಸಿದ್ದಾರೆ. ಅಪರಾಧಿಗಳು ಮೃತಪಟ್ಟಾಗ, ಅವರನ್ನು ಹುತಾತ್ಮರೆಂದು ವೈಭವೀಕರಿಸುವುದು ಬಿಜೆಪಿ ದೌರ್ಬಲ್ಯ ಎಂದು ಹೇಳಿದ್ದಾರೆ. ಕರಾವಳಿಯ ಜನರು ಜಾಗೃತರಾಗುವಂತೆ ಮನವಿ ಮಾಡಿದ ಅವರು ಇಲ್ಲವಾದರೆ ಕೆಳಮಟ್ಟದ ರಾಜಕೀಯ ಜಿಲ್ಲೆಯ ಶಾಂತಿಯನ್ನು ಹಾಳು ಮಾಡಲಿದೆ ಎಂದು ತಿಳಿಸಿದ್ದಾರೆ.

<><><>

ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಕಲ್ಯಾಣ ಮಂಡಳಿ ವತಿಯಿಂದ ನೋಂದಾಯಿತ-ಫಲಾನುಭವಿಗಳಿಗೆ ಹಾಗೂ ಅವರ ಅವಲಂಬಿತರಿಗೆ ಆರೋಗ್ಯ ತಪಾಸಣೆ ಮತ್ತು ಚಿಕಿತ್ಸೆ ಒದಗಿಸುವ ಸಂಚಾರಿ ಆರೋಗ್ಯ ಕ್ಲಿನಿಕ್ ಯೋಜನೆಯನ್ನು ಜಾರಿಗೊಳಿಸಲಾಗಿದೆ ಎಂದು ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಹೇಳಿದರು. ದಾವಣಗೆರೆಯಲ್ಲಿಂದು ೩ ಸಂಚಾರಿ ಆರೋಗ್ಯ ಕ್ಲಿನಿಕ್ ವಾಹನಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಕಾರ್ಮಿಕ ಕಲ್ಯಾಣ ಮಂಡಳಿಯಿಂದ ಸಂಚಾರಿ ಆರೋಗ್ಯ ಕ್ಲಿನಿಕ್ ವಾಹನಗಳನ್ನು ನೀಡಿದ್ದು ಅದರಂತೆ ದಾವಣಗೆರೆ ಜಿಲ್ಲೆಗೆ ಒಟ್ಟು ೩ ಸಂಚಾರಿ ಆರೋಗ್ಯ ಕ್ಲಿನಿಕ್ ವಾಹನಗಳನ್ನು ಹಂಚಿಕೆ ಮಾಡಲಾಗಿದೆ. ಈ ಸಂಚಾರಿ ಆರೋಗ್ಯ ಕ್ಲಿನಿಕ್ ವಾಹನಗಳು ಜಿಲ್ಲೆಯಾದ್ಯಂತ ಸಂಚರಿಸಿ ನೋಂದಾಯಿತ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರಿಗೆ ಹಾಗೂ ಅವರ ಅವಲಂಬಿತರಿಗೆ ಆರೋಗ್ಯ-ತಪಾಸಣೆ ಮತ್ತು ಚಿಕಿತ್ಸೆ ಒದಗಿಸುವ ಕೆಲಸವನ್ನು ನಿರ್ವಹಿಸಲಿವೆ ಎಂದು ಹೇಳಿದರು.

<><><>

ಕಾರು ಮತ್ತು ಲಾರಿ ಮುಖಾಮುಖಿ ಡಿಕ್ಕಿಯಾಗಿ ಕಾರಿನಲ್ಲಿದ್ದ ಐವರು ಸ್ಥಳದಲ್ಲಿಯೇ ಮೃತಪಟ್ಟ ಘಟನೆ ಹುಬ್ಬಳ್ಳಿ ತಾಲ್ಲೂಕಿನ ಕುಸುಗಲ್ ಗ್ರಾಮದ ಬಳಿಯ ಇಂಗಳಹಳ್ಳಿ ಕ್ರಾಸ್ ಬಳಿ ನಡೆದಿದೆ. ವಿಜಯಪುರ ಕಡೆಯಿಂದ ಹುಬ್ಬಳ್ಳಿಗ್ಗೆ ಬರುತ್ತಿದ್ದ ಕಾರು ಚಾಲಕ ನಿಯಂತ್ರಣ ತಪ್ಪಿ ಮುಂದೆ ಬರುತ್ತಿದ್ದ ಲಾರಿಗೆ ಡಿಕ್ಕಿಯಾಗಿದೆ. ಡಿಕ್ಕಿಯಾದ ರಭಸಕ್ಕೆ ಕಾರಿನಲ್ಲಿದ್ದ ೫ ಜನ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಮೃತರೆಲ್ಲರೂ ಶಿವಮೊಗ್ಗ ಜಿಲ್ಲೆಯ ಸಾಗರದವರಾಗಿದ್ದು, ಹುಬ್ಬಳ್ಳಿ ಮಾರ್ಗವಾಗಿ ಶಿವಮೊಗ್ಗ ಕಡೆ ಬರುವಾಗ ಈ ಅವಘಡ ಸಂಭವಿಸಿದೆ. ಈ ಕುರಿತಂತೆ ಹುಬ್ಬಳ್ಳಿ ಗ್ರಾಮೀಣ ಠಾಣೆಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ತನಿಖೆ ಕೈಗೊಂಡಿದ್ದಾರೆ.

<><><>

ಪ್ರಸಕ್ತ ಸಾಲಿನ ಹಿಂಗಾರು ಹಂಗಾಮಿನಲ್ಲಿ ರೈತರಿಂದ ಬೆಂಬಲ ಬೆಲೆಯಲ್ಲಿ ಭತ್ತ ಖರೀದಿಗೆ ನೊಂದಣಿ ಅವಧಿಯನ್ನು ಇದೇ ೩೧ರ ವರೆಗೆ ವಿಸ್ತರಿಸಿ ಸರ್ಕಾರ ಆದೇಶಿಸಿದೆ ಎಂದು ದಾವಣಗೆರೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಕಾರ್ಯಪಡೆ ಸಮಿತಿ ಅಧ್ಯಕ್ಷ ಜಿ.ಎಂ.ಗಂಗಾಧರಸ್ವಾಮಿ ತಿಳಿಸಿದ್ದಾರೆ. ಎ ಗ್ರೇಡ್ ಭತ್ತ ಪ್ರತಿ ಕ್ವಿಂಟಾಲ್‌ಗೆ ೨ ಸಾವಿರದ ೩೨೦ ರೂಪಾಯಿ, ಸಾಮಾನ್ಯ ಭತ್ತವನ್ನು ೨ ಸಾವಿರದ ೩೦೦ ರೂಪಾಯಿ ಬೆಂಬಲ ಬೆಲೆಯಲ್ಲಿ ಖರೀದಿ ಮಾಡಲು ದಾವಣಗೆರೆ, ಚನ್ನಗಿರಿ, ಹರಿಹರ, ನ್ಯಾಮತಿ, ಹೊನ್ನಾಳಿ ಎಪಿಎಂಸಿಗಳಲ್ಲಿ ಖರೀದಿ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಪ್ರತಿ ರೈತರಿಂದ ಗರಿ? ೫೦ ಕ್ವಿಂಟಾಲ್‌ವರೆಗೆ ಖರೀದಿ ಮಾಡಲು ಅವಕಾಶವಿದೆ ಎಂದು ಅವರು ತಿಳಿಸಿದ್ದಾರೆ.

<><><>

ಪಹಲ್ಗಾಮ್ ಭಯೋತ್ಪಾದಕ ದಾಳಿಯ ವಿರುದ್ಧದ ಹೋರಾಟದ ಭಾಗವಾಗಿ ವಿಜಯಪುರ ಭಾರತೀಯ ಜನತಾ ಪಕ್ಷದ ಜಿಲ್ಲಾ ಘಟಕದ ವತಿಯಿಂದ ಭಾರತದಲ್ಲಿ ಅಕ್ರಮವಾಗಿ ವಾಸಿಸುತ್ತಿರುವ ಪಾಕಿಸ್ತಾನಿ ಪ್ರಜೆಗಳನ್ನು ಅವರ ದೇಶಕ್ಕೆ ಗಡಿಪಾರು ಮಾಡುವಂತೆ ಇಂದು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ. ಈ ಸಂದರ್ಭದಲ್ಲಿ ಬಿಜೆಪಿಯ ಜಿಲ್ಲಾ ಘಟಕದ ಮುಖಂಡರು ಮತ್ತು ಕಾರ್ಯಕರ್ತರು ಭಾಗವಹಿಸಿದ್ದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>